## ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\3820\2014\ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 1.8.2016

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ಸರ್ಕಾರಿ ನೌಕರರಾದ ಶ್ರೀ.ಕೇಶವಮೂರ್ತಿ, ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

*******

ಶ್ರೀ.ಹೈದರ್.ಎಂ.ಬಿನ್ ಎಂ.ಎ.ಮಹಮದ್, ನಂ: 222/94, 6ನೇ ಕ್ರಾಸ್, ನಂದಿನಿ ಲೇಔಟ್, ಬೆಂಗಳೂರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ.ಕೇಶವಮೂರ್ತಿ, ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ "ಎದುರುದಾರ ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ರವರ ವಿರುದ್ಧ ಅಧಿಕಾರ ದುರುಪಯೋಗ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ದೇವನಹಳ್ಳಿ ತಾಲ್ಲೂಕು ಚಪ್ಪರ ಕಲ್ಲು ಗ್ರಾಮದಲ್ಲಿ ಬಿ.ಶ್ರೀನಿವಾಸ್ ಎನ್ನುವವರು ಅನಧಿಕೃತವಾಗಿ ನಕಲಿ ವೈದ್ಯಕೀಯ ವೃತ್ತಿ ನಡೆಸುತ್ತಿದ್ದು ಈ ಬಗ್ಗೆ ದಿ: 25.10.2014ರಂದು ಎದುರುದಾರರಿಗೆ ಕ್ರಮ ಕೈಗೊಳ್ಳಲು ದೂರು ನೀಡಿದರೂ ಆದರೆ ಅವರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೇಳಿಕೊಂಡಿದ್ದಾರೆ.

(43)

3) ಎದುರುದಾರರು ದಿ: 9.1.2015ರಂದು ಸಲ್ಲಿಸಿದ ತಮ್ಮ ಆಕ್ಷೇಪಣೆಯಲ್ಲಿ ಡಾ:: ಶ್ರೀನಿವಾಸ್ ಎನ್ನುವವರು ಅನಧಿಕೃತವಾಗಿ ಶ್ರೀ.ವೆಂಕಟೇಶ್ ಕ್ಲೀನಿಕ್ ಅನ್ನು ಚಪ್ಪರಕಲ್ಲು ಗ್ರಾಮದಲ್ಲಿ ನಡೆಸುತ್ತಿದ್ದಾರೆಂದು ದೂರುದಾರರು ಸಲ್ಲಿಸಿದ ದೂರಿನ ಮೇರೆಗೆ ಉಪ ತಹಶೀಲ್ದಾರ್ ಕುಂದಾನ ಹೋಬಳಿ ಅವರಿಂದ ವರದಿ ಪಡೆಯಲಾಗಿದ್ದು ಅದರಲ್ಲಿ ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳು ಸಮಂಜಸವಾಗಿವೆಯೇ ಹೇಗೆ ಎಂಬುದರ ಬಗ್ಗೆ ತಾಲ್ಲೂಕು ವೈದ್ಯಾಧಿಕಾರಿಗಳಿಂದ ವರದಿ ಪಡೆದು ಮುಂದಿನ ಸೂಕ್ತ ಕ್ರಮ ಜರುಗಿಸಬಹುದು ಅಂತ ವರದಿ ಸಲ್ಲಿಸಿದ್ದಾರೆ. ಅದರಂತೆ ಈ ದಾಖಲೆಗಳನ್ನು ಜಿಲ್ಲಾ ಆಯುಶ್ ಅಧಿಕಾರಿಗಳಿಗೆ ದಿ: 6.1.2014ರಂದು ಇವುಗಳನ್ನು ಪರಿಶೀಲಿಸಿ ವರದಿ ನೀಡುವಂತೆ ಕೇಳಿಕೊಳ್ಳಲಾಗಿದೆ ಆದ್ದರಿಂದ ಸದರಿ ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಅಂತ ತಿಳಿಸಿದ್ದಾರೆ.

4) ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಶ್ರೀ.ಶ್ರೀನಿವಾಸ್ ರವರು ಕಳೆದ 16ವರ್ಷಗಳಿಂದಲೂ ಈ ರೀತಿ ಆಸ್ಪತ್ರೆ ನಡೆಸಿಕೊಂಡು ಹೋಗುತ್ತಿದ್ದು ಅವರು ಪಡೆದಿರುವ ಪ್ರಮಾಣ ಪತ್ರಗಳು ದೇಶದ ಯಾವುದೇ ಭಾಗದಲ್ಲಿ ಪಡೆದುಕೊಂಡಿರುತ್ತಾರೆ. ಆದ್ದರಿಂದ ಅವರು ನಕಲಿ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳ ಮೇಲೆ ವೈದ್ಯಕೀಯ ವೃತ್ತಿ ನಡೆಸುತ್ತಿರುವುದರಿಂದ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೇಳಿಕೊಂಡಿದ್ದಾರೆ.

5)ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಶ್ರೀ.ಶ್ರೀನಿವಾಸ್ ಎನ್ನುವವರು Alternative Medical Council Calcutta, Indian Council of Medico Techinicals and Health Care, Service certificate from Sumbramky Environmental Management Private Ltd., ದಿಂದ ಪಡೆದ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದಾರೆ.

(42)

6) ಇದೇ ರೀತಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅನಧಿಕೃತ ಆಸ್ಪತ್ರೆಗಳನ್ನು ತೆರದು ವೈದ್ಯ ವೃತ್ತಿ ನಡೆಸುತ್ತಿರುವ ಅನೇಕ ನಕಲಿ ವೈದ್ಯರ ಬಗ್ಗೆ ದಿನನಿತ್ಯ ಮಾಧ್ಯಮಗಳಲ್ಲಿ ವರದಿಯಾಗುತ್ತಿವೆ. ಇವುಗಳನ್ನು ತಡೆಯದಿದ್ದರೆ ಇವರು ಯಾವುದೇ ವೈಧ್ಯಕೀಯ ತರಬೇತಿ ಹೊಂದದೆ ಮುಗ್ದಜನರಿಗೆ ಚಿಕಿತ್ಸೆ ನೀಡಿ ಅವರ ಪ್ರಾಣಕ್ಕೆ ಕುತ್ತುತರುತ್ತಾರೆ. ಅಲ್ಲದೆ ಈ ತರಬೇತಿ ಇಲ್ಲದ ನಕಲಿ ವೈದ್ಯರ ಚಿಕಿತ್ಸೆಯಿಂದ ಎಷ್ಟೊ ಜನರಿಗೆ ಆರೋಗ್ಯದ ಮೇಲೆ ಅನೇಕ ದುಷ್ಪರಿಣಾಮಗಳು ಉಂಟಾಗುತ್ತದೆ. ಸಮಾನ್ಯ ಜನರು ಈ ನಕಲಿ ವೈಧ್ಯರ ಹಾವಳಿಯನ್ನು ತಡೆಯಲು ಆಗುವುದಿಲ್ಲ ಆದ್ದರಿಂದ ಜಿಲ್ಲೆಯಾದ್ಯಂತ ಇರುವ ನಕಲಿ ವೈದ್ಯರನ್ನು ಪತ್ತೆಹಚ್ಚಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಿ ಅವರು ಅವಶ್ಯಕ ಪ್ರಮಾಣ ಪತ್ರಗಳಿಲ್ಲದೆ ವೈದ್ಯವೃತ್ತಿಯನ್ನು ಮಾಡದೆ ತಡೆಹಿಡಿಯುವುದು ಸರ್ಕಾರದ ಕರ್ತವ್ಯವಾಗಿರುತ್ತದೆ. ಇಂತಹ ವಿಷಯಗಳಲ್ಲಿ ಸೂಕ್ತ ಕ್ರಮ ಕೈಗೊಂಡು ಅನಧಿಕೃತ ವೈದ್ಯವೃತ್ತಿ ತಡೆಯುವಂತೆ ಸರ್ಕಾರಕ್ಕೆ ನಿರ್ದೇಶಿಸುವ ಅಧಿಕಾರವನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12 (1)ರಲ್ಲಿ ಗೌರವಾನ್ವಿತ ಉಪಲೋಕಾಯುಕ್ತರು ಹೊಂದಿದ್ದಾರೆ.

7) ಆದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಒಂದು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 2/8/16.
**(ನ್ಯಾಯಾಮೂರ್ತಿ ಸುಬಾಷ್ ಬಿ ಆಡಿ)**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**